ನಡೆಸಿದರೊ ಹೇಗೆ ಎಂದು ಕೇಳುತ್ತಿದ್ದೇನೆ, ಅದರ ಬಗ್ಗೆ ದಯವಿಟ್ಟು ಪ್ರಕಾಶ್‌ರವರು ಹೇಳಬೇಕು.

(ಗೊಂದಲ)

ಅಧ್ಯಕ್ಷರು: ಪರಸ್ಪರ ಮಾತನಾಡುವುದರಿಂದ, ಏನೂ ಪ್ರಯೋಜನವಿಲ್ಲ, ಇವತ್ತು ಅಜೆಂಡಾದಲ್ಲಿ ಏನಿದೆ, ಆ ಪ್ರಕಾರ ಹೋಗೋಣ, ಈಗ ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು.

2. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಶ್ರೀ ಎಸ್.ಬಿ. ಪಾಟೀಲ್, ಅಪರ ಕಾರ್ಯದರ್ಶಿಗಳು: ಉಭಯ ಸದನಗಳಿಂದ ಅಂಗೀಕಾರವಾದಂತೆ ಹಾಗೂ ಭಾರತದ ಘನತೆವೆತ್ತ ರಾಷ್ಟ್ರಾಧ್ಯಕ್ಷರಿಂದ ಪುನರ್ ಪರಿಗಣನೆಗೆ ಹಿಂತಿರುಗಿಸಲ್ಪಟ್ಟಂತೆ ಹಾಗೂ ವಿಧಾನ ಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ 2004ನೇ ಸಾಲಿನ ಕರ್ನಾಟಕ ಕಾಕಂಬಿ ನಿಯಂತ್ರಣ ವಿಧೇಯಕವನ್ನು ಸಭೆಯ ಮುಂದಿಡುತ್ತೇನೆ.

ಅಧ್ಯಕ್ಷರು: ಮಂಡಿಸಲಾಯಿತು.

3. ವರದಿಯನ್ನೊಪ್ಪಿಸುವುದು

ಶ್ರೀ ಡಿ.ಆರ್. ಪಾಟೀಲ್ (ಅಧ್ಯಕ್ಷರು, ಸರ್ಕಾರಿ ಭರವಸೆಗಳ ಸಮಿತಿ): ಮಾನ್ಯ ಅಧ್ಯಕ್ಷರೆ, ಸರ್ಕಾರಿ ಭರವಸೆಗಳ ಸಮಿತಿಯ ಮೊದಲನೇ ವರದಿಯನ್ನು ಸದನಕ್ಕೆ ಒಪ್ಪಿಸುತ್ತೇನೆ.

ಅಧ್ಯಕ್ಷರು: ಒಪ್ಪಿಸಲಾಯಿತು.

ಶ್ರೀ ಬಸವರಾಜ ರಾಯರೆಡ್ಡಿ (ಅಧ್ಯಕ್ಷರು, ಸಾರ್ವಜನಿಕ ಲೆಕ್ಕಪತ್ರಗಳ ಸಮಿತಿ): ಮಾನ್ಯ ಅಧ್ಯಕ್ಷರೆ, 2005–06ನೇ ಸಾಲಿನ ಸಾರ್ವಜನಿಕ ಲೆಕ್ಕಪತ್ರಗಳ ಸಮಿತಿಯ ಐದು ಹಾಗೂ ಆರನೇ ವರದಿಗಳನ್ನು ಸದನಕ್ಕೆ ಒಪ್ಪಿಸುತ್ತೇನೆ.

ಅಧ್ಯಕ್ಷರು: ಒಪ್ಪಿಸಲಾಯಿತು.

4. ಚುನಾವಣಾ ಪ್ರಸ್ತಾವ

ಶ್ರೀ ಎಂ.ಪಿ. ಪ್ರಕಾಶ್: ಮಾನ್ಯ ಅಧ್ಯಕ್ಷರೆ, ಈಗಾಗಲೇ ದಿನಾಂಕ 3.7.06ರಂದು ವಿಧಾನಸಭೆಯ ವಿವಿಧ ಸಮಿತಿಗಳನ್ನು ರಚಿಸಲಿಕ್ಕೆ ಚುನಾವಣಾ ಪ್ರಸ್ತಾವನೆಯನ್ನು ಮಂಡಿಸಿದ್ದು ಚುನಾವಣಾ ಕಾರ್ಯಕ್ರಮಗಳ ವೇಳಾ

ಪಟ್ಟಿಯನ್ನು ಹೊರಡಿಸಲಾಗಿರುತ್ತದೆ. ಅದರಂತೆ ವಿಧಾನಸಭೆಯ ವಿವಿಧ ಸಮಿತಿಗಳಿಗೆ ಮಾನ್ಯ ಸದಸ್ಯರುಗಳನ್ನು ನಾಮ ನಿರ್ದೇಶನ ಮಾಡಲಿಕ್ಕೆ ಈ ಸದನವು ಮಾನ್ಯ ಸಭಾಧ್ಯಕ್ಷರಿಗೆ ಅಧಿಕಾರ ನೀಡಬೇಕೆಂದು ಕೋರುತ್ತೇನೆ.

ಅಧ್ಯಕ್ಷರು: ಪ್ರಸ್ತಾವ ಏನೆಂದರೆ, "ಮಾನ್ಯ ಗೃಹ ಕಾನೂನು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು ಮಂಡಿಸಿರುವ ದಿನಾಂಕ 3.7.06ರಂದು ವಿಧಾನಸಭೆಯ ವಿವಿಧ ಸಮಿತಿಗಳನ್ನು ರಚಿಸಲಿಕ್ಕೆ ಚುನಾವಣಾ ಪ್ರಸ್ತಾವನೆಯನ್ನು ಮಂಡಿಸಿದ್ದು ಚುನಾವಣಾ ಕಾರ್ಯಕ್ರಮಗಳ ವೇಳಾ ಪಟ್ಟಿಯನ್ನು ಹೊರಡಿಸಲಾಗಿರುತ್ತದೆ. ಅದರಂತೆ ವಿಧಾನಸಭೆಯ ವಿವಿಧ ಸಮಿತಿಗಳಿಗೆ ಮಾನ್ಯ ಸದಸ್ಯರುಗಳನ್ನು ನಾಮ ನಿರ್ದೇಶನ ಮಾಡಲಿಕ್ಕೆ ಈ ಸದನವು ಮಾನ್ಯ ಸಭಾಧ್ಯಕ್ಷರಿಗೆ ಅಧಿಕಾರ ನೀಡುವುದು."

ಪ್ರಸ್ತಾವವನ್ನು ಮಂಡಿಸಲಾಯಿತು ಹಾಗೂ ಅನುಮತಿ ನೀಡಲಾಯಿತು.

5. ಶಾಸನ ರಚನೆ

(ಅ) ಕರ್ನಾಟಕ ರಾಜ್ಯ ಅಲ್ಪ ಸಂಖ್ಯಾತರ ಆಯೋಗ (ತಿದ್ದುಪಡಿ) ವಿಧೇಯಕ, 2006

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಇಕ್ಬಾಲ್ ಅನ್ಸಾರಿ (ಕಾರ್ಮಿಕ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು): ಮಾನ್ಯ ಅಧ್ಯಕ್ಷರೆ, "2006 ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ."

ಅಧ್ಯಕ್ಷರು: ಪ್ರಸ್ತಾವ ಏನೆಂದರೆ;

"2006ರ ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಇಕ್ಬಾಲ್ ಅನ್ಸಾರಿ (ಕಾರ್ಮಿಕ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು): ಮಾನ್ಯ ಅಧ್ಯಕ್ಷರೆ, "2006ರ ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ."